



ಅರುಣ ಪಿ. ಭಟ್ಟ

## ವಾರಭವಿಷ್ಯ: 02.01.2025ರಿಂದ 08.01.2025ರವರೆಗೆ




ದಾನ ಧರ್ಮ ಕಾರ್ಯಗಳಲ್ಲಿ ಆಸಕ್ತಿ ಮೂಡುತ್ತದೆ. ಉದ್ಯೋಗ ವಿಚಾರದಲ್ಲಿ ಅಧಿಕಾರಿಗಳ ಜೊತೆ ಮಾತುಕತೆ ನಡೆಸುವ ಯೋಗ ಇದೆ. ಸೋದರ ಸೋದರಿಯರ ಬಾಂಧವ್ಯ ಗಟ್ಟಿಯಾಗುತ್ತದೆ. ಸಾಮಾಜಿಕ ಸ್ಥಾನಮಾನ ಉತ್ತಮವಾಗುತ್ತದೆ. ಇಡೀ ವಾರ ಆರೋಗ್ಯದಲ್ಲಿ ಏರಿಳಿತ ಇರುತ್ತದೆ. ಉದ್ಯೋಗ ವ್ಯಾಪಾರ ವಿಸ್ತರಣೆಗೆ ಅವಕಾಶ ದೊರೆಯಲಿದೆ. ಶುಭದಿನ 07. ಸೌಂದರ್ಯ ಲಹರಿ ಪಠಿಸಿರಿ.




ಹಣಕಾಸು ವ್ಯವಹಾರದಲ್ಲಿ ಪ್ರಗತಿ. ಈವರೆಗೆ ನೀವು ಎದುರಿಸುತ್ತಿರುವ ಸಮಸ್ಯೆಗಳನ್ನು ಇತರರ ನೆರವಿನಿಂದ ಬಗೆಹರಿಸಿಕೊಳ್ಳಬಹುದು. ಪ್ರೀತಿಪಾತ್ರರ ಬಾಂಧವ್ಯ ಗಟ್ಟಿಯಾಗಲಿದೆ. ಕೆಲಸ ಕಾರ್ಯಗಳಲ್ಲಿ ಒತ್ತಡ ಇರಲಿದೆ. ಅನಗತ್ಯ ವಿವಾದಗಳಲ್ಲಿ ನಿಮ್ಮನ್ನು ವಿರೋಧಿಗಳು ಎಳೆಯುವ ಸಾಧ್ಯತೆ ಇದೆ. ನಿಮ್ಮ ಸಕಾರಾತ್ಮಕ ಆಲೋಚನೆಯಿಂದ ಪರಿಹಾರ ಕಂಡುಕೊಳ್ಳುವಿರಿ. ಶುಭದಿನ 06. ಹನುಮಾನ್ ಚಾಲೀಸ್ ಓದಿರಿ.




ಸಂತಾನ ಅಪೇಕ್ಷಿತರಿಗೆ ಶುಭ ಸುದ್ದಿ ಕೇಳುವ ಯೋಗ. ವಿದ್ಯಾರ್ಥಿಗಳಿಗೆ ಪ್ರಗತಿ ಇದೆ. ಹಿರಿಯರ ಮಾರ್ಗದರ್ಶನ ದೊರೆಯಲಿದೆ. ಹೆಚ್ಚುವರಿ ಆದಾಯವನ್ನು ಮುಂದಿನ ಹಂತಕ್ಕೆ ತೆಗೆದುಕೊಂಡು ಹೋಗಲು ಸೂಕ್ತ ವೇದಿಕೆ ದೊರೆಯಲಿದೆ. ಒಂದಷ್ಟು ಕೆಲಸಗಳು ಮೇಲಿಂದ ಮೇಲೆ ಬರಲಿವೆ. ವಿರೋಧಿಗಳು ಅನಗತ್ಯ ವಾಗ್ವಾದಗಳನ್ನು ಎಳೆದು ತರಬಹುದು. ಶುಭದಿನ 03. ಶ್ರೀ ದತ್ತಗುರು ಸ್ತೋತ್ರ ಪಠಿಸಿರಿ.




ಸೇವಾ ವಲಯದಲ್ಲಿ ಇರುವವರಿಗೆ ಅಂದುಕೊಂಡಂಥ ಫಲಿತಾಂಶ ದೊರೆಯಲಿದೆ. ನಿಮ್ಮ ಯೋಜನೆಗಳು ಹಾಗೂ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಮೇಲಧಿಕಾರಿಗಳ ಜೊತೆ ಮುಖ್ಯವಾದ ಚರ್ಚೆಯಲ್ಲಿ ತೊಡಗಿಕೊಳ್ಳಲಿದ್ದೀರಿ. ಈ ಹಿಂದಿನ ಆರೋಗ್ಯ ಸಮಸ್ಯೆಗಳು ನಿವಾರಣೆ ಆಗುವ ಯೋಗ ಇದೆ. ಆರ್ಥಿಕ ಸ್ಥಿತಿ ಉತ್ತಮಪಡಿಸಿಕೊಳ್ಳುವುದಕ್ಕೆ ಅವಕಾಶ ದೊರೆಯಲಿದೆ. ಶುಭದಿನ 08. ಲಿಂಗಾಷ್ಟಕ ಪಠಿಸಿರಿ.




ಸರ್ಕಾರದ ಕೆಲಸಗಳು ಆಗಬೇಕಿದ್ದಲ್ಲಿ ಅನುಕೂಲ ಇದೆ. ನೀವು ಕೆಲಸ ಮಾಡುತ್ತಿರುವ ಸಂಸ್ಥೆಯಲ್ಲಿ ಮನ್ನಣೆ ಸಿಗಲಿದೆ. ಈ ಅವಧಿಯಲ್ಲಿ ಧಾರ್ಮಿಕ ಕಾರ್ಯಕ್ರಮಗಳಲ್ಲಿ ಪಾಲ್ಗೊಳ್ಳುವ ಅವಕಾಶ ಇದೆ. ವೃತ್ತಿಪರ ಕೆಲಸಗಳನ್ನು ಈ ಹಿಂದಿಗಿಂತಲೂ ಪರಿಣಾಮಕಾರಿಯಾಗಿ ಮಾಡುವಿರಿ. ವ್ಯಾಪಾರಸ್ಥರಿಗೆ ಒಂದೊಳ್ಳೆಯ ವ್ಯಾವಹಾರಿಕ ಸಂಪರ್ಕ ದೊರೆಯಲಿದೆ. ಶುಭದಿನ 07. ಕಾಲಭೈರವನ ಸೇವೆ ಮಾಡಿರಿ.




ಕುಟುಂಬ ಸದಸ್ಯರು, ಬಂಧುಗಳೊಂದಿಗೆ ಉತ್ತಮ ಸಮಯ ಕಳೆಯಲಿದ್ದೀರಿ. ಕಾನೂನು ವ್ಯಾಜ್ಯಗಳು ಇದ್ದಲ್ಲಿ ನಿಮ್ಮ ಪರವಾದ ಬೆಳವಣಿಗೆಗಳು ಆಗಲಿವೆ. ವಿರೋಧಿಗಳಿಗೆ ತಕ್ಕ ಪ್ರತ್ಯುತ್ತರ ನೀಡಲಿದ್ದೀರಿ. ವೈವಾಹಿಕ ಜೀವನ ಸಂತುಷ್ಟವಾಗಿರುತ್ತದೆ. ದೊಡ್ಡ ಮೊತ್ತ ವ್ಯವಹಾರಗಳಿಗೆ ಸಂಬಂಧಿಸಿದಂತೆ ಅಂತಿಮ ತೀರ್ಮಾನಿಸುವ ಮುನ್ನ ತಾಳ್ಮೆಯಿಂದ ಇರಬೇಕು. ಶುಭದಿನ 08. ಶ್ರೀ ಲಕ್ಷ್ಮೀಕನಕಧಾರಾ ಸ್ತೋತ್ರ ಪಠಣ ಮಾಡಿರಿ.




ವೈವಾಹಿಕ ಜೀವನ ಸಂತೋಷವಾಗಿ ಇರುವ ಸಮಯ. ಸಂಗಾತಿ, ಮಕ್ಕಳಿಗೆ ಇರುವ ಭಿನ್ನ ಆಲೋಚನೆಗಳನ್ನು ಸಹ ಒಂದು ಹಂತಕ್ಕೆ ಸರಿಪಡಿಸುವಿರಿ. ವೃತ್ತಿನಿರತರಿಗೆ ಅಂದುಕೊಂಡ ಹುದ್ದೆಯನ್ನು ಪಡೆಯುವ ಅವಕಾಶ ಇದೆ. ಕೌಶಲದ ಮೂಲಕ ಯಶಸ್ಸು ಪಡೆಯುವ ಅವಕಾಶ ಇದೆ. ಈ ವಾರ ದುಃಖಕ್ಕಿಂತ ಸಂತೋಷವಾದ ಕ್ಷಣಗಳನ್ನೇ ಹೆಚ್ಚು ಕಾಣಲಿದ್ದೀರಿ. ಶುಭದಿನ 06. ವಿಷ್ಣು ಸಹಸ್ರನಾಮ ಪಠಿಸಿರಿ.




ವೃತ್ತಿಪರ ಜೀವನದಲ್ಲಿ ಅತ್ಯುತ್ತಮವಾದ ಪ್ರಗತಿ ಇದೆ. ಹಣಕಾಸು ಹೂಡಿಕೆ ವ್ಯವಹಾರದಲ್ಲಿ ಪ್ರಗತಿ ಇದೆ. ವಿರೋಧಿಗಳು ಸಣ್ಣ ಪುಟ್ಟ ಸಮಸ್ಯೆಗಳನ್ನು ಮಾಡಬಹುದು. ವೈವಾಹಿಕ ಜೀವನ ಸಂತೋಷವಾಗಿರುವುದಕ್ಕೆ ಬಹಳ ಶ್ರಮ ವಹಿಸುತ್ತೀರಿ. ಅವಿವಾಹಿತರಿಗೆ ಸೂಕ್ತ ಸಂಬಂಧಗಳು ದೊರೆಯುವ ಯೋಗ ಇದೆ. ಉದ್ಯೋಗ ಸ್ಥಳದಲ್ಲಿ ಗೌರವ, ಕೀರ್ತಿ ಸಿಗಲಿದೆ. ಶುಭದಿನ 04. ಶ್ರೀ ವೆಂಕಟೇಶ್ವರ ಸ್ತೋತ್ರ ಪಠಿಸಿರಿ.




ಆಪ್ತರ ವೃತ್ತಿ ಜೀವನಕ್ಕೆ ಸಹಾಯ ಮಾಡಲಿದ್ದೀರಿ. ವ್ಯಾಪಾರ ಕ್ಷೇತ್ರದಲ್ಲಿ ಇರುವವರಿಗೆ ಏಳ್ಗೆ ಇದೆ. ಹಣಕಾಸು ಹೂಡಿಕೆಯಲ್ಲಿ ಅಂದುಕೊಂಡಂಥ ಫಲಿತಾಂಶ ದೊರೆಯಲಿದೆ. ಸೋದರ ಸಂಬಂಧಿಗಳ ಜತೆಗಿನ ಬಾಂಧವ್ಯ ಗಟ್ಟಿಯಾಗಲಿದೆ. ಈ ಹಿಂದಿನ ಮನಸ್ತಾಪಗಳು ಇದ್ದರೂ ನಿವಾರಣೆ ಆಗುತ್ತದೆ. ಸಂಗಾತಿ, ಮಕ್ಕಳ ಜತೆಗೆ ಉತ್ತಮವಾದ ಸಮಯ ಕಳೆಯಲಿದ್ದೀರಿ. ಶುಭದಿನ 07. ಗುರು ರಾಘವೇಂದ್ರ ರಾಯರ ಆರಾಧನೆ ಮಾಡಿರಿ




ವಾಹನ, ಭೂಮಿ ಖರೀದಿ ವಿಚಾರದಲ್ಲಿ ಅಂದುಕೊಂಡಂತೆ ಬೆಳವಣಿಗೆಗಳು ಆಗಲಿವೆ. ಮನೆ ದುರಸ್ತಿಗೆ ಹೆಚ್ಚಿನ ಖರ್ಚು ಮಾಡಲಿದ್ದೀರಿ. ಮಕ್ಕಳು ಕೌಶಲವನ್ನು ಹೆಚ್ಚಿಸಿಕೊಳ್ಳುವುದಕ್ಕೆ ಸಹಾಯ ಮಾಡಲಿದ್ದೀರಿ. ವೈಯಕ್ತಿಕ ಸಂಬಂಧದಲ್ಲಿ ಈ ಹಿಂದೆಂದಿಗಿಂತ ಹೆಚ್ಚು ಅಕ್ಕರೆ ಇರುತ್ತದೆ. ವಿದ್ಯಾರ್ಥಿಗಳು ಹಲವು ವಿಷಯದಲ್ಲಿ ಪರಿಣತಿ ಪಡೆಯುವ ಅವಕಾಶ ಇದೆ. ಶುಭದಿನ 04. ಶಿವಕವಚ ಪಠಣ ಮಾಡಿರಿ.




ಸಾಮಾಜಿಕ ಕ್ಷೇತ್ರದಲ್ಲಿ ಕಾರ್ಯನಿರ್ವಹಿಸುವವರಿಗೆ ಅತ್ಯುತ್ತಮ ಅವಕಾಶ ದೊರೆಯುತ್ತದೆ. ಯಾವುದೇ ಕೆಲಸಕ್ಕೆ ಹೆಚ್ಚು ಶ್ರಮ ಹಾಕಬೇಕಾಗುತ್ತದೆ. ವ್ಯಾಪಾರ ಕ್ಷೇತ್ರದಲ್ಲಿ ಇರುವವರಿಗೆ ಅಂದುಕೊಂಡಂಥ ಫಲಿತಾಂಶ ದೊರೆಯಲಿದೆ. ಯಾವ ಸಂಸ್ಥೆಯಲ್ಲಿ ಉದ್ಯೋಗ ಗಿಟ್ಟಿಸಬೇಕು ಎಂಬ ಇಚ್ಛೆ ಇರುತ್ತದೋ ಅಲ್ಲಿಂದ ಅವಕಾಶ ದೊರೆಯಲಿದೆ. ಶುಭದಿನ 05. ಆದಿತ್ಯ ಹೃದಯ ಪಠಣ ಮಾಡಿರಿ.




ಸ್ಥಿರಾಸ್ತಿ ವ್ಯವಹಾರಗಳಿಗೆ ಸಂಬಂಧಿಸಿದಂತೆ ಪ್ರಗತಿ ಇದೆ. ಕುಟುಂಬದಲ್ಲಿ ಇದ್ದ ಮನಸ್ತಾಪಗಳನ್ನು ನಿವಾರಣೆ ಮಾಡಿಕೊಳ್ಳಲಿದ್ದೀರಿ. ಆರೋಗ್ಯದ ಬಗ್ಗೆ ಹೆಚ್ಚಿನ ಕಾಳಜಿ ವಹಿಸಬೇಕಾಗುತ್ತದೆ. ಹಣಕಾಸು ಹೂಡಿಕೆ ವ್ಯವಹಾರದಲ್ಲಿ ಒಳ್ಳೆಯ ಲಾಭ ಮಾಡುವ ಅವಕಾಶ ದೊರೆಯಲಿದೆ. ಭವಿಷ್ಯವನ್ನು ಉತ್ತಮಪಡಿಸಿಕೊಳ್ಳಲು ಕೆಲವು ಯೋಜನೆಗಳನ್ನು ರೂಪಿಸಲಿದ್ದೀರಿ. ಶುಭದಿನ 06. ಶ್ರೀರಾಮರಕ್ಷಾ ಸ್ತೋತ್ರ ಓದಿರಿ.